# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ತಿಪ್ಪಣ್ಣಾಪ್ಪ ಕಮಕನೂರು (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 900 |
| ಉತ್ತರಿಸಬೇಕಾದ ದಿನಾಂಕ | : | 11.03.2026 |
| ಉತ್ತರಿಸಬೇಕಾದ ಸಚಿವರು | : | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆಯಲ್ಲಿ ಪ್ರಸ್ತುತ ವಸತಿ ರಹಿತರ ಪಟ್ಟಿಯಲ್ಲಿರುವ (Housing Waitlist) ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು; | ಕಲಬುರಗಿ ಜಿಲ್ಲೆಯಲ್ಲಿ ಕೇಂದ್ರ ಪುರಸ್ಕೃತ ವಸತಿ ಯೋಜನೆಯಾದ ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ) ಅಡಿ Permanent Waiting List ನಲ್ಲಿ **61,846** ವಸತಿ ರಹಿತರಿರುತ್ತಾರೆ.<br><br>ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) ಅಡಿ ಕಲಬುರಗಿ ಜಿಲ್ಲೆಯಲ್ಲಿ Permanent Waiting List ನಲ್ಲಿ **27,618** ವಸತಿ ರಹಿತರಿರುತ್ತಾರೆ |
| ಆ) | 2025-26ರಲ್ಲಿ ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ಲಂ ನಿವಾಸಿಗಳಿಗಾಗಿ ಎಷ್ಟು ಬಹುಮಹಡಿ ಮನೆಗಳನ್ನು (Multi-Storey housing) ಮಂಜೂರು ಮಾಡಲಾಗಿದೆ. | 2025-26ರಲ್ಲಿ ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ಲಂ ನಿವಾಸಿಗಳಿಗೆ ಯಾವುದೇ ವಸತಿ ಯೋಜನೆಯಡಿ ಮನೆಗಳು ಮಂಜೂರಾಗಿರುವುದಿಲ್ಲ. |
| ಇ) | ಕೇಂದ್ರದ ಪಿಎಂ ಆವಾಸ್ ಮತ್ತು ರಾಜ್ಯದ 'ಬಸವ ವಸತಿ' ಯೋಜನೆಯಡಿ ಜಿಲ್ಲೆಗೆ ಬಿಡುಗಡೆಯಾದ ಅನುದಾನದ ಬಳಕೆ ಪ್ರಮಾಣ (Utilization Certificate) ಎಷ್ಟು; | ಕಲಬುರಗಿ ಜಿಲ್ಲೆ ವ್ಯಾಪ್ತಿಯಲ್ಲಿ ಕೇಂದ್ರ ಸರ್ಕಾರದ ಪಿ.ಎಂ.ಎ.ವೈ-ಗ್ರಾಮೀಣ, ಪಿ.ಎಂ.ಎ.ವೈ-ನಗರ ಮತ್ತು ರಾಜ್ಯ ಸರ್ಕಾರದ ಬಸವ ವಸತಿ ಯೋಜನೆಯಡಿ ಫಲಾನುಭವಿಗಳು ಮನೆ ನಿರ್ಮಾಣ ಮಾಡಲಾದ ಭೌತಿಕ ಪ್ರಗತಿಗನುಗುಣವಾಗಿ ಹಿಂದಿನ ಶ್ರೇಣಿಯ ಮನೆಗಳನ್ನು ಒಳಗೊಂಡತೆ ಆರ್ಥಿಕ ವರ್ಷ 2023-24 ನೇ ಸಾಲಿನಿಂದ 2025-26 ನೇ ಸಾಲಿನ ಫೆಬ್ರುವರಿ ಅಂತ್ಯದವರೆಗೆ ರೂ.221.88 ಕೋಟಿಗಳ ಸಹಾಯಧನ ಬಿಡುಗಡೆ ಮಾಡಲಾಗಿದ್ದು, ಯೋಜನಾವಾರು ವಿವರ ಈ ಕೆಳಗಿನಂತಿದೆ:<br><br>ಯೋಜನೆ — ಬಿಡುಗಡೆ (ರೂ.ಕೋಟಿಗಳಲ್ಲಿ)<br>ಪಿ.ಎಂ.ಎ.ವೈ-ಗ್ರಾಮೀಣ — 125.45<br>ಪಿ.ಎಂ.ಎ.ವೈ-ನಗರ — 14.90<br>ಬಸವ ವಸತಿ ಯೋಜನೆ — 81.53<br>**ಒಟ್ಟು** — **221.88**<br><br>ಸರ್ಕಾರವು ಅನುದಾನವನ್ನು ಜಿಲ್ಲಾವಾರು / ವಿಧಾನ ಸಭಾ ಕ್ಷೇತ್ರವಾರು ಬಿಡುಗಡೆ ಮಾಡದೇ ಆಯವ್ಯಯದಲ್ಲಿ ಯೋಜನಾವಾರು ಮತ್ತು ಲೆಕ್ಕ ಶೀರ್ಷಿಕೆವಾರು ಅನುದಾನವನ್ನು ಒದಗಿಸಿ ಬಿಡುಗಡೆ ಮಾಡಲಾಗುತ್ತಿದೆ. ಸದರಿ ಅನುದಾನವನ್ನು ನಿಗಮವು ಮನೆಗಳ ಜಿ.ಪಿ.ಎಸ್ ಪ್ರಗತಿ ಆಧಾರದ ಮೇಲೆ ಫಲಾನುಭವಿಗಳಿಗೆ / ಅನುಷ್ಠಾನಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗುತ್ತಿದ್ದು, ಸದರಿ ಖರ್ಚು ಮಾಡಲಾದ ಮೊತ್ತಕ್ಕೆ ಯೋಜನಾವಾರು ಉಪಯೋಗ ಪ್ರಮಾಣ ಪತ್ರಗಳನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಿ ಅನುದಾನ ಬಿಡುಗಡೆ ಮಾಡುವಂತೆ ಪ್ರಸ್ತಾವನೆಗಳನ್ನು ಸಲ್ಲಿಸಲಾಗುತ್ತಿದೆ. |

| | | |
|---|---|---|
| | | ಆದುದರಿಂದ ಆಯಾ ಯೋಜನೆಗಳಡಿ ಜಿಲ್ಲೆಗಳಿಗೆ ಬಿಡುಗಡೆಯಾದ ಅನುದಾನವು ಸೇರಿದಂತೆ ಬಳಕೆಯಾದ ಅನುದಾನಕ್ಕೆ ಬಳಕೆ ಪ್ರಮಾಣ (Utilization Certificate) ಗಳನ್ನು ನಿಗಮವು ಸಲ್ಲಿಸಲಾಗುತ್ತಿದ್ದು, ಕಳೆದ ಆರ್ಥಿಕ ಸಾಲಿನಲ್ಲಿ ಪ್ರಧಾನ ಮಂತ್ರಿ ಅವಾಸ್ - ಗ್ರಾಮೀಣ ಮತ್ತು ನಗರ ಹಾಗೂ ಬಸವ ವಸತಿ ಯೋಜನೆಯಡಿ ಬಳಕೆ ಪ್ರಮಾಣ (Utilization Certificate) ಪತ್ರ ಲಗತ್ತಿಸಿದೆ. |
| ಈ) | ತಾಂತ್ರಿಕ ಕಾರಣಗಳಿಂದ ತಡೆಹಿಡಿಯಲಾದ ಫಲಾನುಭವಿಗಳ ಹಣವನ್ನು ಬಿಡುಗಡೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ಕೇಂದ್ರ ಸರ್ಕಾರದ ಯೋಜನೆಗಳಡಿ ಅನುದಾನ ಬಿಡುಗಡೆ ಮಾಡುವ ಸಂಬಂಧ SNA SPARSH ಎಂಬ ನೂತನ ವಿಧಾನವನ್ನು ಕೇಂದ್ರದಿಂದ ಜಾರಿಗೆ ತರಲಾಗಿದ್ದು, SNA SPARSH ರಡಿ ತಾಂತ್ರಿಕ ಸಮಸ್ಯೆಗಳಿಂದ ಫಲಾನುಭವಿಗಳಿಗೆ ಸಹಾಯಧನ ಬಿಡುಗಡೆ ಮಾಡುವಲ್ಲಿ ವಿಳಂಬವಾಗಿರುತ್ತದೆ.<br><br>ಪ್ರಸ್ತುತ ಸದರಿ ತಾಂತ್ರಿಕ ಸಮಸ್ಯೆಗಳು ಬಗೆಹರಿದಿದ್ದು, ಫಲಾನುಭವಿಗಳು ಮನೆ ನಿರ್ಮಾಣ ಮಾಡಲಾದ ಭೌತಿಕ ಪ್ರಗತಿಗನುಗುಣವಾಗಿ ಅನುದಾನದ ಲಭ್ಯತೆಗೆ ಅನುಗುಣವಾಗಿ ಸರ್ಕಾರದ ಸಹಾಯಧನ ಬಿಡುಗಡೆ ಮಾಡಲಾಗುತ್ತಿದೆ. |

ಸಂಖ್ಯೆ:ವಇ 83 ಹೆಚ್‌ಎಎಂ 2026

(ಬಿ.ಜೆಡ್. ಜಮೀರ್ ಅಹ್ಮದ್‌ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು